# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 321 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 07-07-2023 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಇಲಾಖೆ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯದಲ್ಲಿರುವ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು: | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರಾಜ್ಯಾದ್ಯಂತ 671 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. |
| ಆ) | ಜೂನ್ ಒಂದರಿಂದಲೇ ರಾಜ್ಯದಾದ್ಯಂತ ಪದವಿ ಪೂರ್ವ ಕಾಲೇಜುಗಳು ಆರಂಭವಾಗಿದ್ದರೂ ಸರ್ಕಾರಿ ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು ಆನ್‌ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿವೆಯೇ: ಬಂದಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು: | 2023-24ನೇ ಸಾಲಿಗೆ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿರುತ್ತದೆ. ಹೊಸದಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಕೋರಿ ಅರ್ಜಿ ಸಲ್ಲಿಸಲು ದಿನಾಂಕ:05-06-2023 ರಿಂದ ಇಲಾಖಾ ವೈಬ್ ಸೈಟ್‌ನಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಪ್ರವೇಶ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಇ) | ಗುಣಮಟ್ಟದ ಶಿಕ್ಷಣ ಹಾಗೂ ಉಚಿತ ವಸತಿ ಸೌಲಭ್ಯ ಸಿಗುವ ಕಾರಣಕ್ಕೆ ಕೆಲವೊಂದು ಜಿಲ್ಲೆಗಳಿಗೆ ಹೊರ ಜಿಲ್ಲೆಗಳಿಂದ ಬಡ ಹಾಗೂ ಮಧ್ಯಮ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಹಾಗೂ ಕೂಲಿ ಕಾರ್ಮಿಕರ ಮಕ್ಕಳು ಪ್ರವೇಶಾತಿ ಪಡೆಯಲು ಆಸಕ್ತಿ ತೋರಿದ್ದು, ಇಂತಹ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರ ಕೈಗೊಂಡ ಕ್ರಮವೇನು? | ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪ.ಜಾತಿ/ಪ.ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ ಉಳಿದಂತೆ ನಿಲಯಗಳಲ್ಲಿನ ಶೇಕಡ 25%ರಷ್ಟು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಕಾಲೇಜು ಹತ್ತಿರ ಇರುವ ನಿಲಯಗಳಿಗೆ ಆದ್ಯತೆಯ ಮೇರೆಗೆ ಕೌನ್ಸಿಲಿಂಗ್ ಮೂಲಕ ಪ್ರವೇಶಾವಕಾಶ ನೀಡಲಾಗುತ್ತಿದೆ. |

| | | |
|---|---|---|
| | | ಪ್ರಸ್ತುತ, ಇಲಾಖೆಯ ವೆಬ್‌ಸೈಟ್ SHP (STATE HOSTEL PORTAL) ನಲ್ಲಿ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳುವ ಸಂಬಂಧ ನವೀಕರಣ ವಿದ್ಯಾರ್ಥಿಗಳಿಗೆ AUTO Renewal ಅವಕಾಶ ಕಲ್ಪಿಸಲು ಹಾಗೂ ಹೊಸದಾಗಿ ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು Provision Allotment Modal ಮೂಲಕ ದಾಖಲಾತಿ ಮಾಡಿಕೊಳ್ಳಲು ಪೋರ್ಟಲ್‌ನಲ್ಲಿ ಅವಕಾಶ ಕಲ್ಪಿಸುವಂತೆ ಯೋಜನಾ ನಿರ್ದೇಶಕರು, ಎಸ್ ಹೆಚ್‌ಪಿ & ಐಸ್‌ಎಸ್‌ಪಿ, ಬೆಂಗಳೂರು ರವರಿಗೆ ಸೂಚಿಸಲಾಗಿದೆ.<br><br>ಅದರಂತೆ, 2023-24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳಲ್ಲಿ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾವಕಾಶ ನೀಡಲಾಗುತ್ತಿದೆ ಹಾಗೂ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾಂತರ ವಿದ್ಯಾರ್ಥಿಗಳಿಗೆ ಶೇಕಡ 25%ರಷ್ಟು ಸೀಟುಗಳಂತೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. ಅಲ್ಲದೇ ಹಿಂದುಳಿದ ವರ್ಗ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಶೇಕಡ 25%ರಷ್ಟು ಪ್ರವೇಶ ನೀಡಲಾಗುತ್ತಿದೆ. |

**ಸಕಇ 216 ಎಸ್‌ಎಲ್‌ಪಿ 2023**

**(ಡಾ|| ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಇಲಾಖೆ ಸಚಿವರು**